ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಬೀದರ್ ಜಿಲ್ಲೆಯ ಬ್ರಿಮ್ಸ್ ಕಾಲೇಜು ಮತ್ತು ಆಸ್ಪತ್ರೆ ನರ್ಸ್‌ಗಳ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

1414 (1715) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಬ್ರಿಮ್ಸ್ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಶುಶ್ರೂಷಕಿಯರು (ನರ್ಸ್) ಹಾಗೂ `ಡಿ' ಗ್ರೂಪ್ ನೌಕರರ ಮಂಜೂರಾತಿಯಾದ ಹುದ್ದೆಗಳು ಎಷ್ಟು ;

(ಆ) ಅದರಲ್ಲಿ, ಖಾಯಂ ಇರುವವರ ಸಂಖ್ಯೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ತೆಗೆದುಕೊಂಡ ನೌಕರರ ಸಂಖ್ಯೆ ಎಷ್ಟು ; ಅವರನ್ನು ನೇಮಕಾತಿ ಮಾಡಲು ಯಾವ ನಿಯಮವನ್ನು ಅನುಸರಿಸಲಾಗಿದೆ ಹೊರಗುತ್ತಿಗೆಯಿಂದ ನೇಮಕ ಮಾಡಲು ಪತ್ರಿಕಾ ಜಾಹೀರಾತು ಹೊರಡಿಸಲಾಗಿದೆಯೇ; ಮತ್ತು ನೇಮಕಾತಿಗಾಗಿ ಯಾವ ಪ್ರಕ್ರಿಯೆಯನ್ನು ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಬ್ರಿಮ್ಸ್ ಕಾಲೇಜಿನಲ್ಲಿ ಎರವಲು ಸೇವೆಯ ಮೇಲೆ ಬಂದ ನೌಕರರು ಅವ್ಯವಹಾರದಲ್ಲಿ ಪಾಲ್ಗೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆ ನೌಕರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಎರವಲು ಸೇವೆಯ ಮೇಲೆ ಬಂದ ನೌಕರರು ಅದೇ ಸ್ಥಳದಲ್ಲಿ ಮುಂದುವರೆಯಲು ಕಾರಣವೇನು; ಅದೇ ಸ್ಥಳದಲ್ಲಿ ಮುಂದುವರಿಸಿದ್ದು ಯಾವ ಉದ್ದೇಶಕ್ಕಾಗಿ ?